ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ : 327+485+484

ಮಾನ್ಯ ಸದಸ್ಯರುಗಳ ಹೆಸರು : ಶ್ರೀಮತಿ ಭಾರತಿ ಶೆಟ್ಟಿ (ನಾಮ ನಿರ್ದೇಶಿತರು), ಶ್ರೀ ಶಶೀಲ್ ಜಿ. ನಮೋಶಿ (ಶಿಕ್ಷಕರ ಕ್ಷೇತ್ರ) ಹಾಗೂ ಶ್ರೀ ಎಸ್.ವಿ. ಸಂಕನೂರ (ಪದವೀಧರರ ಕ್ಷೇತ್ರ)

ಉತ್ತರಿಸುವ ದಿನಾಂಕ : 10.12.2020

ಉತ್ತರಿಸುವವರು : ಮಾನ್ಯ ಮುಖ್ಯಮಂತ್ರಿಗಳು

ಕ್ರ. ಸಂ.	ಪ್ರಶ್ನೆ	ಉತ್ತರ
ಅ)	ನೂತನ ಪಿಂಚಣಿ ವ್ಯವಸ್ಥೆಯಲ್ಲಿ ಕೇಂದ್ರ ಸರ್ಕಾರ ಅನುಸರಿಸುತ್ತಿರುವ ನೀತಿ ಬಗ್ಗೆ ರಾಜ್ಯ ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು;	ಹಳೆಯ ಪಿಂಚಣಿ ಯೋಜನೆಯ ಆರ್ಥಿಕ ಹೊರೆಯನ್ನು ನಿಭಾಯಿಸಲು ಸಾಕಷ್ಟು ನಿಧಿಯ ಆಧಾರ ಇಲ್ಲದಿರುವುದರಿಂದ ಹಾಗೂ ರಿಸರ್ವ್ ಬ್ಯಾಂಕ್‌ರವರು ರಚಿಸಿದ ಸಮಿತಿಯ ವರದಿಯ ಶಿಫಾರಸ್ಸಿನ ಆಧಾರದ ಮೇಲೆ ಕೇಂದ್ರ ಸರ್ಕಾರವು ನೂತನ ಪಿಂಚಣಿ ಯೋಜನೆಯನ್ನು ದಿನಾಂಕ: 01.01.2004 ರಿಂದ ಜಾರಿಗೊಳಿಸಿರುತ್ತದೆ. ಅದರಂತೆಯೇ ಇತರೆ ರಾಜ್ಯಗಳು ಈ ಯೋಜನೆಯನ್ನು ಅಳವಡಿಸಿಕೊಂಡ ಹಿನ್ನೆಲೆಯಲ್ಲಿ, ಕರ್ನಾಟಕ ರಾಜ್ಯವು ಕೂಡ ಸರ್ಕಾರದ ಆದೇಶ ಸಂಖ್ಯೆ: ಆಇ (ಎಸ್.ಪಿ.ಎಸ್.) 04 ಪಿಇಟಿ 2005, ದಿನಾಂಕ: 31.03.2006ರನ್ವಯ ದಿನಾಂಕ: 01.04.2006ರಂದು ಮತ್ತು ತದನಂತರ ಸರ್ಕಾರಿ ಸೇವೆಗೆ ಸೇರುವ ನೌಕರರಿಗೆ ನೂತನ ಪಿಂಚಣಿ ಯೋಜನೆಯನ್ನು ಜಾರಿಗೆ ತಂದಿದೆ.
ಆ)	ದೆಹಲಿ ಹೈಕೋರ್ಟ್ ತೀರ್ಪನ್ನು ರಾಜ್ಯ ಸರ್ಕಾರ ಯಾವ ರೀತಿಯಲ್ಲಿ ಜಾರಿಗೊಳಿಸುತ್ತದೆ? (ವಿವರ ಒದಗಿಸುವುದು).	ನಿರ್ದಿಷ್ಟವಾದ ತೀರ್ಪಿನ ಉಲ್ಲೇಖವಿಲ್ಲದ ಕಾರಣ ಉತ್ತರವನ್ನು ನೀಡಲು ಸಾಧ್ಯವಿಲ್ಲ.
ಇ)	ರಾಜ್ಯ ಸರ್ಕಾರಿ ನೌಕರರಿಗೆ ಹೊಸ ಪಿಂಚಣಿ ವ್ಯವಸ್ಥೆಯನ್ನು (ಎನ್.ಪಿ.ಎಸ್) ರದ್ದುಪಡಿಸಿ ಹಳೆ ಪಿಂಚಣಿ ವ್ಯವಸ್ಥೆಯನ್ನು ಜಾರಿ ತರುವ ದೃಷ್ಟಿಯಿಂದ ಅಧ್ಯಯನ ಸಮಿತಿಯನ್ನು ರಚಿಸಿರುವುದು ನಿಜವೇ; ಹಾಗಿದ್ದಲ್ಲಿ, ಸಮಿತಿಯು ಎಷ್ಟು ಬಾರಿ ಸಭೆ ಸೇರಿದೆ; ಹಾಗೂ ಸಮಿತಿಯು ಸರ್ಕಾರಕ್ಕೆ ತನ್ನ ಅಂತಿಮ ವರದಿಯನ್ನು ಸಲ್ಲಿಸಿದೆಯೇ;	ನೂತನ ಪಿಂಚಣಿ ಯೋಜನೆಗೆ ಸೂಕ್ತ ಬದಲಾವಣೆ/ಮಾರ್ಪಾಡು ಮಾಡಲು ಸರ್ಕಾರದ ಆದೇಶ ಸಂಖ್ಯೆ: ಆಇ 107 ಪಿಇಎನ್ 2018, ದಿನಾಂಕ: 11.12.2018 ರನ್ವಯ ಅಧಿಕಾರಿಗಳನ್ನೊಳಗೊಂಡ ಸಮಿತಿಯನ್ನು ರಚಿಸಲಾಗಿದೆ. ಸಮಿತಿಯು ಎರಡು ಸಭೆಗಳನ್ನು ನಡೆಸಿದೆ. ಸಮಿತಿಯ ವರದಿಯನ್ನು ನಿರೀಕ್ಷಿಸಿದೆ.

	ಸಲ್ಲಿಸಿದ್ದಲ್ಲಿ, ವರದಿಯ ಮುಖ್ಯಾಂಶಗಳೇನು; ಸಲ್ಲಿಸದಿದ್ದಲ್ಲಿ, ಯಾವ ಕಾಲಮಿತಿಯೊಳಗೆ ಸಲ್ಲಿಸಲಾಗುವುದು?	

ಆಇ 133 ಪಿಇಎನ್ 2020

(ಬಿ.ಎಸ್. ಯಡಿಯೂರಪ್ಪ)
ಮುಖ್ಯಮಂತ್ರಿ